**ಕರ್ನಾಟಕ ವಿಧಾನ ಪರಿಷತ್ತು**

| | | |
|---|---|---|
| ಸದಸ್ಯರ ಹೆಸರು | : | ಶ್ರೀ ಎಂ. ನಾಗರಾಜು (ವಿಧಾನ ಸಭೆಯಿಂದ ಚುನಾಯಿತರಾದವರು) |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 196(174) |
| ಉತ್ತರಿಸುವ ಸಚಿವರು | : | ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು |
| ಉತ್ತರಿಸಬೇಕಾದ ದಿನಾಂಕ | : | 12-08-2025 |

*****

| ಕ್ರಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯ ಸರ್ಕಾರದ ವತಿಯಿಂದ ನೇಕಾರರ ಕ್ಷೇಮಾಭಿವೃದ್ಧಿ ಕಾಪಾಡಲು ಹಲವಾರು ಯೋಜನೆಗಳಾದ ಸಬ್ಸಿಡಿ ವಿದ್ಯುತ್, ಕಡಿಮೆ ಬಡ್ಡಿದರದ ಸಾಲಗಳು, ವಿದ್ಯಾರ್ಥಿ ವೇತನಗಳು ಮತ್ತು ಇನ್ನಿತರೇ ಯೋಜನೆಗಳನ್ನು ಘೋಷಿಸಿದರೂ ಸಹ ಈ ವಲಯವು ಗಮನಾರ್ಹ ಕುಸಿತ ಕಾಣಿಸಿಕೊಳ್ಳಲು ಕಾರಣಗಳೇನು: | (ಅ ಮತ್ತು ಆ)<br><br>ರಾಜ್ಯದ ನೇಕಾರರ ಏಳಿಗೆಗಾಗಿ ಸರ್ಕಾರವು ಈ ಕೆಳಕಂಡ ಯೋಜನೆಗಳನ್ನು ರೂಪಿಸಿ ಅನುಷ್ಠಾನಗೊಳಿಸಲಾಗುತ್ತಿದೆ.<br><br>ಕೈಮಗ್ಗ ಯೋಜನೆಗಳು:-<br>• ನೇಕಾರರ ಸಮ್ಮಾನ್ ಯೋಜನೆಯಡಿ ಕೈಮಗ್ಗ ನೇಕಾರರಿಗೆ ವಾರ್ಷಿಕ ರೂ.5,000/- ಗಳ ಆರ್ಥಿಕ ನೆರವು ನೀಡುವುದು.<br>• ಕೈಮಗ್ಗ ವಿಕಾಸ ಯೋಜನೆಯಡಿ ಹೊಸ ಕೈಮಗ್ಗ ಹಾಗೂ ಅಗತ್ಯ ಸಲಕರಣೆಗಳನ್ನು ಖರೀದಿಸಲು ಘಟಕ ವೆಚ್ಚದ ಶೇಕಡ 50 ರಷ್ಟು ಸಹಾಯಧನ ಒದಗಿಸುವುದು.<br>• ಕೈಮಗ್ಗಗಳಿಗೆ ಮೋಟರೈಸ್ಡ್ ಜಕಾರ್ಡ್ ಸಲಕರಣೆಗಳ ಕಿಟ್ ಒದಗಿಸಲು ಪ್ರತಿ ಘಟಕಕ್ಕೆ ವೆಚ್ಚವಾಗುವ ಮೊತ್ತಕ್ಕೆ ಸರ್ಕಾರದ ವತಿಯಿಂದ ಸಾಮಾನ್ಯ ವರ್ಗದವರಿಗೆ ಶೇ.50 ರಷ್ಟು ಸಹಾಯಧನ ಹಾಗೂ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ಫಲಾನುಭವಿಗಳಿಗೆ ಶೇ.90 ರಷ್ಟು ಸಹಾಯಧನವನ್ನು ಒದಗಿಸುವುದು.<br>• ನೇಕಾರರು ನೇಕಾರಿಕೆ ಉದ್ದೇಶಕ್ಕಾಗಿ ಸಹಕಾರ ಸಂಘ / ಸಹಕಾರ ಬ್ಯಾಂಕ್‌ಗಳಿಂದ ಪಡೆಯುವ ಸಾಲಕ್ಕೆ ಶೂನ್ಯ ಹಾಗೂ ಶೇ.1 ಬಡ್ಡಿ ದರದಲ್ಲಿ ರೂ.2.00 ಲಕ್ಷಗಳವರೆಗೆ, ಶೇ.3 ರ ಬಡ್ಡಿ ದರದಲ್ಲಿ ರೂ.2.00 ಲಕ್ಷಗಳಿಂದ ರೂ.5.00 ಲಕ್ಷಗಳವರೆಗೆ ಸಾಲ ನೀಡಲಾಗುವುದು.<br>• ನೇಕಾರರು ನೇಕಾರಿಕೆ ಉದ್ದೇಶಕ್ಕಾಗಿ ಸಹಕಾರ ಸಂಘ / ಸಹಕಾರ ಬ್ಯಾಂಕ್ / ವಾಣಿಜ್ಯ ಬ್ಯಾಂಕ್‌ಗಳಿಂದ ಪಡೆಯುವ ಸಾಲಕ್ಕೆ ಶೇ.8 ರಷ್ಟು ಬಡ್ಡಿ ಸಹಾಯಧನ ನೀಡಲಾಗುವುದು.<br>• ಕೈಮಗ್ಗ ನೇಕಾರರ ಸಹಕಾರ ಸಂಘಗಳು ತಮ್ಮ ಕೈಮಗ್ಗ ಉತ್ಪನ್ನಗಳ ಮಾರಾಟ ಮೇಲೆ ರಾಜ್ಯ ಸರ್ಕಾರದಿಂದ ಶೇ.20 ರಿಬೇಟ್ ಅನ್ನು ಮರು ಸಂದಾಯ ಪಾವತಿಸಲಾಗುತ್ತಿದೆ.<br>• ಕಚ್ಚಾಮಾಲು ಖರೀದಿ ಮೇಲೆ ಕೈಮಗ್ಗ ಸಹಕಾರ ಸಂಘಗಳಿಗೆ ಪ್ರತಿ ಕೆ.ಜಿ ಗೆ ರೂ.15/- ರ ಸಹಾಯಧನ ನೀಡುವುದು.<br>• ಮಿತವ್ಯಯ ನಿಧಿ ಯೋಜನೆಯಡಿ ನೇಕಾರರ ಮಜೂರಿಯಿಂದ |
| ಆ) | ನೇಕಾರರ ಏಳಿಗೆಗಾಗಿ ಹೊಸದಾಗಿ ಕೈಗೊಂಡಿರುವ ಕ್ರಮ ಮತ್ತು ಯೋಜನೆಗಳು ಯಾವುವು: | |

ಶೇ.8 ನ್ನು ಕಟಾಯಿಸಿ ರಾಜ್ಯ ಸರ್ಕಾರದ ಶೇ.8 ರ ಸಮಚಂದಾ ಸೇರಿಸಿ ಖಜಾನೆಯಲ್ಲಿ ಜಮಾ ಮಾಡಲಾಗುವುದು ಜಮೆಯಾದ ಮೊತ್ತಕ್ಕೆ ಶೇ.12 ರ ಬಡ್ಡಿಯನ್ನು ನೀಡಲಾಗುವುದು.

- ಸಾಮಾನ್ಯ ಸೌಲಭ್ಯ ಕೇಂದ್ರ ನಿರ್ಮಾಣಕ್ಕಾಗಿ ಸರ್ಕಾರದಿಂದ ಯೋಜನಾ ವೆಚ್ಚದ ಶೇ.80 ರಷ್ಟು ಅನುದಾನ ನೀಡಲಾಗುವುದು.
- ಕೈಮಗ್ಗ ನೇಕಾರರ ಸಹಕಾರ ಸಂಘಗಳಿಗೆ ಹಿಂದಿನ 3 ವರ್ಷಗಳ ಸರಾಸರಿ ವಹಿವಾಟಿನ ಮೇಲೆ ಶೇ.50 ರಷ್ಟನ್ನು ಅಥವಾ ರೂ.5.00 ಲಕ್ಷಗಳ ಗರಿಷ್ಠ ಮಿತಿಗೆ ಒಳಪಟ್ಟು ಒಂದಾವರ್ತಿ ಪ್ರೋತ್ಸಾಹಧನ ನೀಡಲಾಗುವುದು.
- ಉಣ್ಣೆ ವಲಯ ಮನಃಶ್ಚೇತನ ಮತ್ತು ಬಲವರ್ಧನೆ ಯೋಜನೆಯಡಿ ಸಹಾಯಧನ.
- ರಾಜ್ಯದ ಕೈಮಗ್ಗ ನೇಕಾರರ ಕೈಮಗ್ಗ ಉತ್ಪನ್ನಗಳನ್ನು ಪ್ರೋತ್ಸಾಹಿಸಲು ಹಾಗೂ ಬೆಂಬಲ ನೀಡಲು ರೇಷ್ಮೆ, ಹತ್ತಿ ಮತ್ತು ಉಣ್ಣೆ ಕ್ಷೇತ್ರ / ವಲಯದಲ್ಲಿ ಕೈಮಗ್ಗ ನೇಕಾರರು ಹೊಂದಿರುವ ನೈಪುಣ್ಯತೆ / ಶ್ರೇಷ್ಠತೆ / ತಾಂತ್ರಿಕತೆ / ಉತ್ಕೃಷ್ಟತೆಗಾಗಿ ಕೈಮಗ್ಗ ನೇಕಾರರಿಗೆ ರಾಜ್ಯ ಮಟ್ಟದ ಪ್ರಶಸ್ತಿ ನೀಡಲಾಗುತ್ತಿದೆ.

  ಕೇಂದ್ರ ಪುರಸ್ಕೃತ ರಾಷ್ಟ್ರೀಯ ಕೈಮಗ್ಗ ಅಭಿವೃದ್ಧಿ ಕಾರ್ಯಕ್ರಮ (NHDP) ದಡಿ ಕೈಮಗ್ಗ ನೇಕಾರರಿಗೆ ಮುದ್ರಾ ಯೋಜನೆಯಡಿ ಸಾಲ ಸೌಲಭ್ಯ.
- ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮದಡಿ ನೋಂದಾಯಿತ ನೇಕಾರರಿಗೆ ಕಚ್ಚಾ ನೂಲನ್ನು ಒದಗಿಸಿ ಅವರು ಉತ್ಪಾಸಿದ ಬಟ್ಟೆಗಳನ್ನು ಸ್ವೀಕರಿಸಿ ಪರಿವರ್ತನಾ ಶುಲ್ಕವನ್ನು ಒದಗಿಸಲಾಗುತ್ತಿದೆ.

ವಿದ್ಯುತ್‌ಮಗ್ಗ ಯೋಜನೆಗಳು:-

- ನೇಕಾರರ ಸಮ್ಮಾನ್ ಯೋಜನೆಯಡಿ ವಿದ್ಯುತ್‌ಮಗ್ಗ ನೇಕಾರರಿಗೆ ವಾರ್ಷಿಕ ರೂ.5,000/- ಗಳ ಆರ್ಥಿಕ ನೆರವು ನೀಡುವುದು.
- ನೇಕಾರರ ಮಕ್ಕಳಿಗೆ ವಿದ್ಯಾರ್ಥಿ ವೇತನ.
- 02 ವಿದ್ಯುತ್ ಮಗ್ಗ ಖರೀದಿಗೆ ಸಹಾಯಧನ.
- ಎಲೆಕ್ಟ್ರಾನಿಕ್ ಜಕಾರ್ಡ್ ಖರೀದಿಗೆ ಸಹಾಯಧನ.
- ವಿದ್ಯುತ್ ರಿಯಾಯಿತಿ ಸಹಾಯಧನ – 01 ರಿಂದ 10 ಹೆಚ್.ಪಿ ವಿದ್ಯುತ್ ಸಂಪರ್ಕ ಪಡೆದ ವಿದ್ಯುತ್ ಮಗ್ಗ ಹಾಗೂ ಮಗ್ಗ ಪೂರ್ವ ಘಟಕಗಳಿಗೆ ಉಚಿತವಾಗಿ ವಿದ್ಯುತ್ ಪೂರೈಸಿ ಶೂನ್ಯ ಬಿಲ್ ನೀಡಲಾಗುತ್ತಿದೆ ಹಾಗೂ 10.01 ರಿಂದ 20 ಹೆಚ್.ಪಿ ವಿದ್ಯುತ್ ಸಂಪರ್ಕ ಪಡೆದ ವಿದ್ಯುತ್ ಮಗ್ಗ ಹಾಗೂ ಮಗ್ಗ ಪೂರ್ವ ಘಟಕಗಳಿಗೆ ಬಳಸಿದ ಒಟ್ಟು ಯೂನಿಟ್‌ಗಳಿಗೆ ಪ್ರತಿ ಯೂನಿಟ್‌ಗೆ ರೂ.1.25 ರಂತೆ ವಿದ್ಯುತ್ ಶುಲ್ಕವನ್ನು

..3

| | | |
|---|---|---|
| | | (Energy Charges) ಘಟಕದವರು ಪಾವತಿಸುವುದು. ಬಾಕಿ ಉಳಿಯುವ ವಿದ್ಯುತ್ ಶುಲ್ಕದ ಮೊತ್ತವನ್ನು ಮಾತ್ರ ಸರ್ಕಾರದ ಬೊಕ್ಕಸದಿಂದ ಭರಿಸಲಾಗುತ್ತಿದೆ.<br>• ಸೈಜಿಂಗ್ ಘಟಕ ಸ್ಥಾಪನೆಗೆ ಸಹಾಯಧನ.<br>• ಮಿನಿ ಪವರ್‌ಲೂಮ್ ಪಾರ್ಕ್ ಸ್ಥಾಪನೆಗೆ ಸಹಾಯಧನ.<br>• ಪ್ರೊಸೆಸ್ಸಿಂಗ್ ಘಟಕ ಸ್ಥಾಪನೆಗೆ ಸಹಾಯಧನ.<br>• 20 ಹೆಚ್.ಪಿ ಯಿಂದ 200 ಹೆಚ್.ಪಿ ವರೆಗಿನ ವಿದ್ಯುತ್ ಸಂಪರ್ಕ ಹೊಂದಿರುವ SCSP / TSP ವಿದ್ಯುತ್ ಮಗ್ಗ ಘಟಕಗಳಿಗೆ ನಲ್ಲಿ ಶೇ.50 ರಷ್ಟು ವಿದ್ಯುತ್ ಸಹಾಯಧನ ಒದಗಿಸಲಾಗುವುದು.<br>ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ರಡಿ ಜವಳಿ ಕ್ಷೇತ್ರಕ್ಕೆ ಸಂಬಂಧಿಸಿದ ಸಣ್ಣ ಮತ್ತು ಅತಿ ಸಣ್ಣ (ಎಸ್.ಎಂ.ಇ) ಘಟಕಗಳ ಸ್ಥಾಪನೆಗೆ ಸಹಾಯಧನ.<br><br>ರಾಜ್ಯ ಸರ್ಕಾರದ ವತಿಯಿಂದ ನೇಕಾರರ ಕ್ಷೇಮಾಭಿವೃದ್ಧಿ ಕಾಪಾಡಲು ವಿವಿಧ ಯೋಜನೆಗಳನ್ನು ನೀಡುತ್ತಿದ್ದರೂ ಸಹ ಹಲವಾರು ಕಾರಣಗಳಿಂದ ಕ್ಷೀಣಿಸುತ್ತಿರುವುದು ಕಂಡುಬಂದಿರುತ್ತದೆ. ಉದಾಹರಣೆಗೆ:-<br>• ಬಹಳಷ್ಟು ನೇಕಾರರು ತಮ್ಮ ಮುಂದಿನ ಪೀಳಿಗೆಗೆ ನೇಕಾರಿಕೆ ಬದಲಾಗಿ ಮಕ್ಕಳಿಗೆ ಉತ್ತಮ ಶಿಕ್ಷಣ ಕೊಡಿಸುತ್ತಿದ್ದು, ಶಿಕ್ಷಣ ಪಡೆದ ಬಹಳಷ್ಟು ಮಕ್ಕಳು ವಿವಿಧ ಉದ್ಯೋಗದಲ್ಲಿ ತೊಡಗಿದ್ದು, ಮೂಲ ಸಾಂಪ್ರದಾಯ ವೃತ್ತಿಯಲ್ಲಿ ತೊಡಗಿಸಿಕೊಂಡಿರುವುದಿಲ್ಲ. |
| ಇ) | ಬಾಂಗ್ಲಾದೇಶ ಮತ್ತು ಚೀನಾದಂತಹ ದೇಶಗಳು ಜವಳಿ ಉದ್ಯಮದಲ್ಲಿ ಅತ್ಯಾಧುನಿಕ ಉಪಕರಣಗಳು ಮತ್ತು ತಂತ್ರಾಂಶಗಳನ್ನು ಬಳಸಿಕೊಂಡಂತೆ ಕರ್ನಾಟಕ ರಾಜ್ಯವು ಈ ತಂತ್ರಾಂಶಗಳನ್ನು ಬಳಸಿಕೊಳ್ಳಲು ಆಗುತ್ತಿರುವ ಅಡಚಣೆಗಳೇನು; ಮತ್ತು ಈ ಜವಳಿ ಕ್ಷೇತ್ರಗಳಲ್ಲಿ ಉದ್ಯೋಗಾವ ಕಾಶಗಳಿಗೆ ಸಂಬಂಧಿಸಿದಂತೆ ಉದ್ಭವಿಸುತ್ತಿರುವ ಸವಾಲುಗಳು ಯಾವುವು? | ರಾಜ್ಯದಲ್ಲಿ ಜವಳಿ ಉದ್ದಿಮೆದಾರರು ಅತ್ಯಾಧುನಿಕ ಉಪಕರಣಗಳು ಮತ್ತು ತಂತ್ರಾಂಶಗಳನ್ನು ಅಳವಡಿಸಿಕೊಂಡು ಘಟಕಗಳನ್ನು ಸ್ಥಾಪಿಸಿ, ಉತ್ಪಾದನೆಯಲ್ಲಿ ತೊಡಗಿಸಿಕೊಂಡಿರುತ್ತಾರೆ.<br><br>ರಾಜ್ಯವು ಸಿದ್ಧ ಉಡುಪು ಕ್ಷೇತ್ರದಲ್ಲಿ ಮುಂಚೂಣಿಯಲ್ಲಿದ್ದು, ಶೇ.20 ರಷ್ಟು ದೇಶದ ಉತ್ಪಾದನೆಯಲ್ಲಿ ಕೊಡುಗೆ ನೀಡುತ್ತಿದೆ. ವಿಶ್ವದ ಪ್ರಮುಖ ಬ್ರ್ಯಾಂಡ್‌ಗಳನ್ನು ರಾಜ್ಯದ ಹಲವು ಭಾಗಗಳಲ್ಲಿ ಸಿದ್ಧಪಡಿಸಿ ರಫ್ತು ಮಾಡಲಾಗುತ್ತಿದೆ. |
| | | ರಾಜ್ಯದಲ್ಲಿ ಜವಳಿ ಕ್ಷೇತ್ರದಲ್ಲಿ 32,896 ಕಾರ್ಮಿಕರು ಹಾಗೂ ಸಿದ್ಧ ಉಡುಪು ಕ್ಷೇತ್ರದಲ್ಲಿ 4,02,958 ಕಾರ್ಮಿಕರು ಹೀಗೆ ಒಟ್ಟು 4,35,854 ಕಾರ್ಮಿಕರು ಜವಳಿ ಉದ್ಯಮದಲ್ಲಿ ಕಾರ್ಯ ನಿರ್ವಹಿಸುತ್ತಿರುತ್ತಾರೆ.<br><br>ರಾಜ್ಯದಲ್ಲಿ ಜವಳಿ ಉದ್ಯಮದಲ್ಲಿ ಅತ್ಯಾಧುನಿಕ ಉಪಕರಣಗಳು ಮತ್ತು ತಂತ್ರಾಂಶಗಳನ್ನು ಅಳವಡಿಸಿಕೊಂಡು ಸ್ಥಾಪಿಸುವ ಘಟಕಗಳಿಗೆ ಜವಳಿ ಮತ್ತು ಸಿದ್ಧ ಉಡುಪು ನೀತಿ ರಡಿ ಸಾಲಾಧಾರಿತ ಬಂಡವಾಳ ಸಹಾಯಧನವನ್ನು ನೀಡಲಾಗುತ್ತಿದೆ ಹಾಗೂ ಹೊಸದಾಗಿ ಸ್ಥಾಪಿಸುವ ಸಿದ್ಧ ಉಡುಪು ಘಟಕಗಳಿಗೆ ಈ |

...4

| | | |
|---|---|---|
| | | ಕೆಳಕಂಡ ಸವಲತ್ತುಗಳನ್ನು ನೀಡಲಾಗುತ್ತಿದೆ.<br>• ಸಾಲಾಧಾರಿತ ಬಂಡವಾಳ ಸಹಾಯಧನ<br>• ಬಡ್ಡಿ ಸಹಾಯಧನ<br>• ವಿದ್ಯುತ್‌ಚ್ಛಕ್ತಿ ಮರುಪಾವತಿ ಸಹಾಯಧನ<br>• ಇ.ಎಸ್.ಐ ಮತ್ತು ಇ.ಪಿ.ಎಫ್ ಮರುಪಾವತಿ ಸಹಾಯಧನ<br>• ವೇತನ ಮರುಪಾವತಿ ಸಹಾಯಧನ (Wage subsidy)<br>ಜವಳಿ ಕ್ಷೇತ್ರಗಳಲ್ಲಿ ಉದ್ಯೋಗಾವಕಾಶಗಳಿಗೆ ಸಂಬಂಧಿಸಿದಂತೆ ಯಾವುದೇ ಸವಾಲುಗಳು ವರದಿಯಾಗಿರುವುದಿಲ್ಲ. |

ಸಂಖ್ಯೆ: **CI 176 JAKE 2025**

(ಶಿವಾನಂದ ಎಸ್. ಪಾಟೀಲ)
ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು